**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಸಿ4(9)/ವಾ.ಕ್ರಿ.ಯೋ/ಅನುಷ್ಠಾನ/01/2024-25 ದಿನಾಂಕ:02-04-2025

**ಜ್ಞಾಪನ**

**ವಿಷಯ:-** ರಾಜ್ಯದಲ್ಲಿ ರಾಜ್ಯ ಪಠ್ಯಕ್ರಮದ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ,ಪ್ರೌಢ ಶಾಲೆಗಳಿಗೆ 2025-26 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಶೈಕ್ಷಣಿಕ ಅವಧಿಗಳು ಮತ್ತು ರಜಾ ಅವಧಿಗಳನ್ನು ನಿಗದಿಪಡಿಸುವ ಬಗ್ಗೆ.

**ಉಲ್ಲೇಖ :** 01.ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ:ಸಿ4(8)/ವಾ.ಕ್ರಿ.ಯೋ/ಅನುಷ್ಠಾನ 01/2023-24, ದಿನಾಂಕ : 28-03-2024

02. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು ರವರ ಅಧಿಸೂಚನೆ ಸಂಖ್ಯೆ:DPAR/16/HHL/2024, ದಿನಾಂಕ:21-11-2024

*************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2024-25ನೇ ಸಾಲಿನ ಚಟುವಟಿಕೆಗಳು ಮುಕ್ತಾಯವಾಗುತ್ತಲ್ಲಿದ್ದು, ಮುಂದಿನ 2025-26ನೇ ಸಾಲಿನ ಶೈಕ್ಷಣಿಕ ಸಾಲಿನ ಚಟುವಟಿಕೆಗಳನ್ನು ಪ್ರಾರಂಭಿಸಲು ಸದರಿ ಸಾಲಿನಲ್ಲಿ ಎಂದಿನಂತೆ ಅಗತ್ಯ ಪೂರ್ವಸಿದ್ಧತೆಗಾಗಿ ದಿನಾಂಕ: 29.05.2025 ರಿಂದ ಶಾಲೆ ಪ್ರಾರಂಭಿಸಲು ಸೂಚಿಸಲಾಗಿದೆ. ಅದರಂತೆ ವಾರ್ಷಿಕ ಶೈಕ್ಷಣಿಕ ಕ್ರಿಯಾಯೋಜನೆಯ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿದೆ. ಪ್ರಯುಕ್ತ ರಾಜ್ಯದ ಎಲ್ಲಾ ರಾಜ್ಯ ಪಠ್ಯಕ್ರಮದ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಏಕರೂಪದ ಶೈಕ್ಷಣಿಕ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ಸಹಾಯವಾಗುವಂತೆ ಒಟ್ಟು ವಾರ್ಷಿಕ ದಿನಗಳಲ್ಲಿ ಲಭ್ಯವಾಗುವ ಶೈಕ್ಷಣಿಕ ಚಟುವಟಿಕೆ ಅವಧಿಗಳು, ಕರ್ತವ್ಯದ ದಿನಗಳು ಮತ್ತು ರಜಾ ದಿನಗಳನ್ನಾಧರಿಸಿ ಅದಕ್ಕನುಗುಣವಾಗಿ ವಾರ್ಷಿಕ ಕಾರ್ಯಸೂಚಿಯನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದ್ದು, ರಾಜ್ಯ ಪಠ್ಯಕ್ರಮದ ಎಲ್ಲಾ ಶಾಲೆಗಳಲ್ಲಿ ಅನುಷ್ಠಾನಗೊಳಿಸಿ ಮತ್ತು ಅನುಪಾಲನೆ ಮಾಡಲು ತಿಳಿಸಿದೆ.

**2025-26 ನೇ ಸಾಲಿನ ಶಾಲಾ ಕರ್ತವ್ಯದ ದಿನಗಳು**

| | |
|---|---|
| ಮೊದಲನೇ ಅವಧಿ | ದಿನಾಂಕ: 29-05-2025 ರಿಂದ ದಿನಾಂಕ: 19-09-2025 ರವರೆಗೆ |
| ಎರಡನೇ ಅವಧಿ | ದಿನಾಂಕ: 08-10-2025 ರಿಂದ ದಿನಾಂಕ: 10-04-2026 ರವರೆಗೆ |

**ರಜಾ ದಿನಗಳು**

| | |
|---|---|
| ದಸರಾ ರಜೆ | ದಿನಾಂಕ: 20-09-2025 ರಿಂದ ದಿನಾಂಕ:07-10-2025 ರ ವರೆಗೆ |
| ಬೇಸಿಗೆ ರಜೆ | ದಿನಾಂಕ: 11-04-2026 ರಿಂದ ದಿನಾಂಕ: 28-05-2026 ರ ವರೆಗೆ |

**2025-26 ನೇ ಶೈಕ್ಷಣಿಕ ಸಾಲಿಗೆ ಶಾಲಾ ಕರ್ತವ್ಯದ ದಿನಗಳು ಮತ್ತು ರಜಾ ದಿನಗಳ ವಿವರ**

| ಕ್ರ ಸಂ | ತಿಂಗಳು ಮತ್ತು ವರ್ಷ | ಲಭ್ಯವಿರುವ ತಿಂಗಳಿನ ಒಟ್ಟು ದಿನಗಳು | ಒಟ್ಟು ರಜಾ ದಿನಗಳು | ಲಭ್ಯವಿರುವ ಶಾಲಾ ಕರ್ತವ್ಯದ ದಿನಗಳು |
|---|---|---|---|---|
| 1 | ಮೇ-2025 | 31 | 28 | 03 |
| 2 | ಜೂನ್ -2025 | 30 | 06 | 24 |
| 3 | ಜುಲೈ-2025 | 31 | 04 | 27 |
| 4 | ಆಗಸ್ಟ್-2025 | 31 | 07 | 24 |
| 5 | ಸೆಪ್ಟಂಬರ್-2025 | 30 | 14 | 16 |
| 6 | ಅಕ್ಟೋಬರ್-2025 | 31 | 12 | 19 |
| 7 | ನವೆಂಬರ್-2025 | 30 | 07 | 23 |
| 8 | ಡಿಸೆಂಬರ್-2025 | 31 | 05 | 26 |
| 9 | ಜನವರಿ-2026 | 31 | 06 | 25 |
| 10 | ಫೆಬ್ರುವರಿ-2026 | 28 | 04 | 24 |
| 11 | ಮಾರ್ಚ್ -2026 | 31 | 08 | 23 |
| 12 | ಏಪ್ರಿಲ್-2026 | 30 | 22 | 08 |
| | | **365** | **123** | **242** |

## ಒಟ್ಟು ಶಾಲಾ ಕರ್ತವ್ಯದ ದಿನಗಳ ನಿರ್ವಹಣಾ ವಿವರ

| | | |
|---|---|---|
| 1 | 2025-26 ನೇ ಶೈಕ್ಷಣಿಕ ಸಾಲಿಗೆ ಲಭ್ಯವಾಗುವ ಒಟ್ಟು ಶಾಲಾ ಕರ್ತವ್ಯದ ದಿನಗಳು | 242 |
| 2 | ಪರೀಕ್ಷೆಗಳು ಮತ್ತು ಮೌಲ್ಯಾಂಕನ ಕಾರ್ಯಕ್ಕಾಗಿ (FA & SA) | 26 |
| 3 | ಪಠ್ಯೇತರ ಚಟುವಟಿಕೆಗಳ/ಪಠ್ಯ ಚಟುವಟಿಕೆಗಳ/ ಸ್ಪರ್ಧೆಗಳ ನಿರ್ವಹಣಾ ಕಾರ್ಯಕ್ಕಾಗಿ | 22 |
| 4 | ಮೌಲ್ಯಮಾಪನಾ ಮತ್ತು ಫಲಿತಾಂಶ ವಿಶ್ಲೇಷಣೆ ಕಾರ್ಯಕ್ಕಾಗಿ | 10 |
| 5 | ಶಾಲಾ ಸ್ಥಳೀಯ ರಜೆಗಳು | 04 |
| 6 | ಬೋಧನಾ-ಕಲಿಕಾ ಪ್ರಕ್ರಿಯೆಗೆ ಉಳಿಯುವ ಕರ್ತವ್ಯದ ದಿನಗಳು | 178 |

**ವಿಶೇಷ ಸೂಚನೆಗಳು:**

**A. 2024-25 ನೇ ಶೈಕ್ಷಣಿಕ ಸಾಲಿನ ಮುಕ್ತಾಯ ಹಂತದಲ್ಲಿ ನಿರ್ವಹಿಸಬೇಕಾದ ಅಂಶಗಳ ಕುರಿತು**

1) 1 ರಿಂದ 9ನೇ ತರಗತಿವರೆಗೆ ಮೌಲ್ಯಾಂಕನ ಪರೀಕ್ಷೆಗಳ ಮೌಲ್ಯಮಾಪನವನ್ನು ಪೂರ್ಣಗೊಳಿಸಿ ಫಲಿತಾಂಶವನ್ನು ಶೇ 100 ಅಂಕಗಳಿಗೆ ಕ್ರೋಢೀಕರಿಸಿ ನಿಯಮಾನುಸಾರ ಗ್ರೇಡ್ ದಾಖಲಿಸಿ SATS ನಲ್ಲಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ ದಿನಾಂಕ:07-04-2025 ರೊಳಗೆ ಹಾಗೂ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ದಿನಾಂಕ:08-04-2025ರೊಳಗೆ ಇಂದೀಕರಿಸತಕ್ಕದ್ದು.

2) 5, 8 ಮತ್ತು 9ನೇ ತರಗತಿಯ SA-2 ಮೌಲ್ಯಾಂಕನ ಸೇರಿದಂತೆ ಉಳಿದ 1 ರಿಂದ 9 ನೇ ತರಗತಿಗಳ ಫಲಿತಾಂಶವನ್ನು ನಿಯಮಾನುಸಾರ ವಿಶ್ಲೇಷಿಸಿ, ನಿಗದಿಪಡಿಸಿದಂತೆ ದಿನಾಂಕ 08.04.2025 ರಂದು ಪ್ರಾಥಮಿಕ ಶಾಲಾ ಹಂತದಲ್ಲಿ ಹಾಗೂ ದಿನಾಂಕ 09.04.2025 ರಂದು ಪ್ರೌಢಶಾಲಾ ಹಂತದಲ್ಲಿ ಎರಡನೇ ಸಮುದಾಯ ದತ್ತ ಶಾಲೆ/ಪೋಷಕರ ಸಭೆ ಕರೆದು ಪ್ರಕಟಣೆ ಮಾಡುವುದು.

3) ದಿನಾಂಕ:14-04-2025 ರಂದು ಡಾ॥ ಬಿ.ಆರ್ ಅಂಬೇಡ್ಕರ್ ರವರ ಜಯಂತಿಯನ್ನು ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ಹಾಗೂ ಎಸ್.ಡಿ.ಎಂ.ಸಿ/ ಖಾಸಗಿ ಶಾಲೆಗಳಲ್ಲಿ ಸಂಬಂಧಿಸಿದ ಆಡಳಿತ ಮಂಡಳಿಯವರು ಮತ್ತು ಮಕ್ಕಳೊಂದಿಗೆ ಉತ್ತಮ ಪೂರ್ವ ತಯಾರಿಯೊಂದಿಗೆ ಆಚರಿಸತಕ್ಕದ್ದು.

4) ಶಾಲಾ ಸ್ಥಳೀಯ ರಜೆಗಳಿಗೆ ಸಂಬಂಧಿಸಿದಂತೆ ಶಾಲಾವಾರು ನಿರ್ದಿಷ್ಟಪಡಿಸಿದ ದಿನಾಂಕಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಪೂರ್ವಭಾವಿಯಾಗಿ ಜೂನ್-2025 ರ ಮೊದಲನೇ ವಾರದಲ್ಲಿ ಅನುಮೋದನೆ ನೀಡುವುದು. ಅನುಮೋದಿಸಿದ ದಿನಾಂಕಗಳಿಗೆ ಮಾತ್ರ ಸ್ಥಳೀಯ ರಜೆ ಹೊಂದುವುದು.

5) 2025-26 ನೇ ಸಾಲಿಗೆ ಸರ್ಕಾರಿ ಶಾಲೆಗಳ 1 ರಿಂದ 10ನೇ ತರಗತಿಯ ಎಲ್ಲಾ ಮಕ್ಕಳಿಗೆ 02 ಜೊತೆ ಉಚಿತ ಸಮವಸ್ತ್ರ ಮತ್ತು ಪಠ್ಯಪುಸ್ತಕ ಹಾಗೂ ಖಾಸಗಿ ಶಾಲೆಗಳಿಗೆ ಪಠ್ಯಪುಸ್ತಕಗಳು ಸಂಬಂಧಿಸಿದ ತಾಲ್ಲೂಕುಗಳಿಗೆ ಸರಬರಾಜು ಆದ ತಕ್ಷಣ ಸಂಬಂಧಿಸಿದ ಶಾಲೆಗಳ ಮುಖ್ಯೋಪಾಧ್ಯಾಯರ ಮುಖಾಂತರ ಮಕ್ಕಳಿಗೆ ತಲುಪಿಸುವ ಕುರಿತು ಕ್ರಮವಹಿಸುವುದು.

6) ದಿನಾಂಕ:11-04-2025 ರಿಂದ ದಿನಾಂಕ:28-05-2025 ರವರೆಗೆ ಶಾಲೆಗಳಿಗೆ ಬೇಸಿಗೆ ರಜೆ ಘೋಷಣೆಯಾಗಿರುವುದರಿಂದ ಶಾಲಾ ಮುಖ್ಯಸ್ಥರು ಶಾಲಾ ದಾಸ್ತಾನು ಮತ್ತು ದಾಖಲೆಗಳನ್ನು ಹಾಗೂ ಅಕ್ಷರ ದಾಸೋಹ ಕಾರ್ಯಕ್ರಮದಡಿ ಮಧ್ಯಾಹ್ನದ ಬಿಸಿಯೂಟದ ಸಾಮಗ್ರಿಗಳನ್ನು ಸುರಕ್ಷಿತವಾಗಿ ಸಂಗ್ರಹಿಸಿಡುವುದು ಹಾಗೂ ಬರಪೀಡಿತ ತಾಲ್ಲೂಕುಗಳಲ್ಲಿ ರಜಾ ಅವಧಿಯಲ್ಲಿ ಮಕ್ಕಳಿಗೆ ಬಿಸಿ ಊಟ ನೀಡುವ ಕುರಿತು ಸಂಬಂಧಿಸಿದ ನಿರ್ದೇಶನಾಲಯದಿಂದ ನೀಡುವ ಸೂಚನೆಗಳಂತೆ ಕ್ರಮವಹಿಸುವುದು. ಒಂದು ವೇಳೆ ಈ ಅವಧಿಯಲ್ಲಿ ಅಧಿಕೃತ ಚುನಾವಣಾ ಕಾರ್ಯಕ್ಕೆ ಮತಗಟ್ಟೆ ಕೇಂದ್ರಗಳನ್ನಾಗಿ ಶಾಲೆಗಳನ್ನು ಬಳಸಲು ಸಂಬಂಧಿಸಿದ ಪ್ರಾಧಿಕಾರ ಕೋರಿದ್ದಲ್ಲಿ ಸಹಕರಿಸಲು ಸೂಚಿಸಿದೆ.

**B. 2025-26ನೇ ಶೈಕ್ಷಣಿಕ ಸಾಲಿನಲ್ಲಿ ನಿರ್ವಹಿಸಬೇಕಾದ ಅಂಶಗಳ ಕುರಿತು**

1. ದಿನಾಂಕ:29-05-2025ರಿಂದ ಶಾಲೆಗಳು ಪ್ರಾರಂಭವಾಗಲಿದ್ದು, ಮುಖ್ಯ ಶಿಕ್ಷಕರು ಮತ್ತು ಶಿಕ್ಷಕರು ಸದರಿ ದಿನದಂದು ಶಾಲೆಗಳಿಗೆ ಹಾಜರಾಗಿ ಅಗತ್ಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವುದು. ವಿದ್ಯಾರ್ಥಿಗಳ ಶಾಲಾ ಪ್ರವೇಶಾತಿಯನ್ನು/ದಾಖಲಾತಿಯನ್ನು ದಿನಾಂಕ:30.05.2025 ರಿಂದ ಶಾಲಾ ಪ್ರಾರಂಭೋತ್ಸವದೊಂದಿಗೆ ಆರಂಭಿಸಿ, ದಿನಾಂಕ : 30.06.2025 ರಂದು ಮುಕ್ತಾಯಗೊಳಿಸತಕ್ಕದ್ದು.

2. ಕೆಲವು ಮಕ್ಕಳು ನಿರಂತರವಾಗಿ ಶಾಲೆಗೆ ಗೈರುಹಾಜರಾಗುತ್ತಿರುವುದು ಮತ್ತು ಶಾಲೆಯನ್ನು ಅರ್ಧದಲ್ಲಿಯೇ ಬಿಡುವ ಮಕ್ಕಳನ್ನು ಕಡ್ಡಾಯವಾಗಿ ಹಾಜರಾತಿ ಅಧಿಕಾರಿಯು (ಶಿಕ್ಷಣ ಸಂಯೋಜಕರು) CRP & BRP ಗಳೊಂದಿಗೆ ಸಂಪರ್ಕದಲ್ಲಿದ್ದು, ದಾಖಲಾತಿ ಆಂದೋಲನದ ಮುಖಾಂತರ ವ್ಯಾಪಕ ಪ್ರಚಾರ ಕೈಗೊಂಡು ಶಾಲಾ ಮುಖ್ಯವಾಹಿನಿಗೆ ತರುವುದು.

3. ಕ್ರಿಸ್‌ಮಸ್ ರಜೆ ಬೇಡಿಕೆಯನ್ನು ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳು ತಮ್ಮ ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಸಲ್ಲಿಸಿದಲ್ಲಿ ಈ ಬಗ್ಗೆ ಆಯಾ ಉಪನಿರ್ದೇಶಕರು (ಆಡಳಿತ) ರವರು ಈ ಕುರಿತು ಪರಿಶೀಲಿಸಿ ನಿರ್ಧರಿಸುವುದು. ಸದರಿ ಡಿಸೆಂಬರ್ ಮಾಹೆಯಲ್ಲಿ ನೀಡುವ ಕ್ರಿಸ್ ಮಸ್ ರಜಾ ಅವಧಿಯನ್ನು ಅಕ್ಟೋಬರ್ ಮಾಹೆಯ ಮಧ್ಯಂತರ ರಜೆಯಲ್ಲಿ ಕಡಿತಗೊಳಿಸಿ ಸರಿದೂಗಿಸಿಕೊಳ್ಳಲು ಕ್ರಮವಹಿಸತಕ್ಕದ್ದು.

4. ರಾಜ್ಯ/ಜಿಲ್ಲಾ ಕಛೇರಿಗಳಿಂದ ನಿಯೋಜಿಸಿದ ಜಿಲ್ಲಾ ಮತ್ತು ತಾಲ್ಲೂಕು ಶೈಕ್ಷಣಿಕ ಉಸ್ತುವಾರಿ ನೋಡಲ್ ಅಧಿಕಾರಿಗಳು, ಜಿಲ್ಲಾ ಹಂತದಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ರವರುಗಳು, ಬ್ಲಾಕ್ ಹಂತದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ, ಕ್ಲಸ್ಟರ್ ಹಂತದಲ್ಲಿ ಸಿ.ಆರ್.ಪಿಗಳು, ತಮ್ಮ ತಮ್ಮ ವ್ಯಾಪ್ತಿಗನುಗುಣವಾಗಿ ಕ್ರಿಯಾಶೀಲ ಮೇಲ್ವಿಚಾರಣೆ ಮತ್ತು ಶೈಕ್ಷಣಿಕ ಉಸ್ತುವಾರಿ ಕ್ರಿಯಾ ಯೋಜನೆಯನ್ನು ಈ ಮುಂದೆ ನೀಡಲಾಗುವ ಶೈಕ್ಷಣಿಕ ಮಾರ್ಗದರ್ಶಿಯಲ್ಲಿ ತಿಳಿಸುವಂತೆ ತಯಾರಿಸಿಕೊಂಡು ಶಾಲೆಗಳ ಪ್ರಾರಂಭಕ್ಕೆ ಪೂರ್ವ ತಯಾರಿ ಮಾಡಿಕೊಳ್ಳುವುದು. ಶಾಲೆಗಳ ಪ್ರಾರಂಭದ ಸಮಯದಲ್ಲಿ ಇರುವ ಇಲಾಖಾ ಪ್ರೋತ್ಸಾಹದಾಯಕ ಯೋಜನೆಗಳಾದ PM ಪೋಷಣ್, ಕ್ಷೀರ ಭಾಗ್ಯ, ಹಾಗೂ ಪೂರೈಸಲಾಗುವ ಸಮವಸ್ತ್ರ, ಪಠ್ಯಪುಸ್ತಕ ವಿತರಣೆಗೆ ಕ್ರಮವಹಿಸುವುದು. ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಅಭಿವೃದ್ಧಿಪಡಿಸಲು **ಮಿಂಚಿನ ಸಂಚಾರ** ಕೈಗೊಂಡು ಉಸ್ತುವಾರಿ ಮಾಡುವುದು.

5. ರಾಷ್ಟ್ರೀಯ ಹಬ್ಬಗಳಾದ ಗಣರಾಜ್ಯೋತ್ಸವ, ಸ್ವಾತ್ರಂತ್ರ್ಯ ದಿನಾಚರಣೆ ಹಾಗೂ ನಾಡ ಹಬ್ಬವಾದ ಕರ್ನಾಟಕ ರಾಜ್ಯೋತ್ಸವ ಮತ್ತು ಇತರೆ ಪ್ರಮುಖ ಜಯಂತಿಗಳನ್ನು ಕಡ್ಡಾಯವಾಗಿ ಆಯಾ ದಿನಗಳಂದು ಗೌರವಪೂರ್ವಕವಾಗಿ ಆಚರಿಸತಕ್ಕದ್ದು.

6. ನಿಗಧಿಪಡಿಸಿದ ಶೈಕ್ಷಣಿಕ ಕರ್ತವ್ಯದ ಅವಧಿಗಳು ಕಡಿಮೆಯಾಗದಂತೆ ಮುಷ್ಕರ, ಮಳೆಗಾಗಿ, ಇನ್ನಿತರೆ ಅನಿರೀಕ್ಷಿತ ಕಾರಣಗಳಿಂದಾಗಿ ಶಾಲೆಗೆ ರಜೆ ಘೋಷಣೆಯಾದಲ್ಲಿ ಆ ಅವಧಿಯ ಶಾಲಾ ಕರ್ತವ್ಯದ ದಿನಗಳನ್ನು ಮುಂದಿನ ರಜಾ ದಿನಗಳಲ್ಲಿ ಪೂರ್ಣದಿನದ ಶಾಲೆಗಳನ್ನು ನಡೆಸಿ, ಶಾಲಾ ಕರ್ತವ್ಯದ ದಿನಗಳನ್ನು ಸರಿದೂಗಿಸಿಕೊಳ್ಳಲು ಉಪನಿರ್ದೇಶಕರು/ಕ್ಷೇತ್ರ ಶಿಕ್ಷಣಾಧಿಕಾರಿಗಳು ಕ್ರಮವಹಿಸುವುದು.

7. ಪರೀಕ್ಷಾ ದಿನಗಳು, ಮೌಲ್ಯಾಂಕನ ದಿನಗಳು, ಹಾಗೂ ಪೂರಕ ಶೈಕ್ಷಣಿಕ ಚಟುವಟಿಕೆ ನಡೆಸುವ ದಿನಗಳನ್ನು ಕೂಡ ಶಾಲಾ ಕರ್ತವ್ಯದ ದಿನವೆಂದು ನಿಗದಿತ ಅವಧಿಗಳಲ್ಲಿ ಪರಿಗಣಿಸುವುದು.

8. 2025-26 ನೇ ಸಾಲಿನ ವಾರ್ಷಿಕ ಶೈಕ್ಷಣಿಕ ಮಾರ್ಗಸೂಚಿಯನ್ನು ಸಿದ್ಧಪಡಿಸಿ ನಂತರ ಪೂರೈಸಲಾಗುವುದು. ಅದರಂತೆ ಶಾಲಾ/ಕ್ಲಸ್ಟರ್/ತಾಲ್ಲೂಕು ಹಾಗೂ ಜಿಲ್ಲಾ ಹಂತಗಳಲ್ಲಿ ಕ್ರಿಯಾ ಯೋಜನೆ ರೂಪಿಸಿಕೊಂಡು ಅನುಪಾಲನೆ ಮಾಡತಕ್ಕದ್ದು.

ವಿಶೇಷ ಸೂಚನೆ:- ಕಾಲಕಾಲಕ್ಕೆ ಸರ್ಕಾರದಿಂದ ನೀಡುವ ಸೂಚನೆಗಳನ್ನು ಮತ್ತು ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಿಳಿಸಿದೆ.

**ಆಯುಕ್ತರು**
**ಶಾಲಾ ಶಿಕ್ಷಣ ಇಲಾಖೆ**

ರವರಿಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ಶಾಲಾ ಶಿಕ್ಷಣ ಇಲಾಖೆ. ರವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ರಾಜ್ಯ ಪಠ್ಯಕ್ರಮದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು

1. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ..
3. ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ 6ನೇ ಕ್ರಾಸ್ ಮಲ್ಲೇಶ್ವರಂ ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
5. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ 18ನೇ ಅಡ್ಡರಸ್ತೆ ಮಲ್ಲೇಶ್ವರಂ ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
6. ನಿರ್ದೇಶಕರು, ಪ್ರಧಾನ ಮಂತ್ರಿ ಪೋಷಣ್ ಶಕ್ತಿ ಅಭಿಯಾನ (ಮಧ್ಯಾಹ್ನ ಉಪಹಾರ ಯೋಜನೆ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
7. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಕಂದಾಯ ಇಲಾಖೆ, ರವರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ.
8. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಪಂಚಾಯತ್ ರಾಜ್ ಇಲಾಖೆ, ರವರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ.
9. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ /ಕಲಬುರಗಿ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
10. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮತ್ತು ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಮಾಹಿತಿಗಾಗಿ.
11. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರುಗಳಿಗೆ.
12. ಸಹ ನಿರ್ದೇಶಕರು(ಶಾಲಾ ಶಿಕ್ಷಣ),ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
13. ಹಿರಿಯ ಸಹಾಯಕ ನಿರ್ದೇಶಕರು(ಇ-ಆಡಳಿತ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
14. ಕಛೇರಿ ಪ್ರತಿ